ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

2

ಪತ್ರಿಕಾ ತುಣುಕುಗಳು

PAPER CLIPPINGS

ಕರ್ನಾಟಕ ವಿಧಾನ ಸಭೆ

ಶಾಖೆ / ವಿಷಯ : DEPARTMENT / SUBJECT: (ಕೋವಿಡ್-19)

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ      ದಿನಾಂಕ : DATE : 05/08/2020

# ಪ್ರತಿಪಕ್ಷ ನಾಯಕನಿಗೂ ಕರೋನಾ ಪಾಸಿಟಿವ್

## ಸಿದ್ದರಾಮಯ್ಯ ಸಂಪರ್ಕದಲ್ಲಿದ್ದ ಅನೇಕರು ಕ್ವಾರಂಟೈನ್

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಕರೋನಾ ಸೋಂಕು ದೃಢಪಟ್ಟ ಒಂದು ದಿನದ ಅಂತರದಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ಕರೋನಾ ಪಾಸಿಟಿವ್ ಕಾಣಿಸಿಕೊಂಡಿರುವುದು ಭಾರಿ ಆತಂಕಕ್ಕೆ ಕಾರಣವಾಗಿದೆ.



ಸೋಂಕಿರುವ ಬಗ್ಗೆ ಮಂಗಳವಾರ ಬೆಳಗ್ಗೆ ಸ್ವತಃ ಸಿದ್ದರಾಮಯ್ಯ ಅವರು ಖಚಿತಪಡಿಸಿದ್ದಾರೆ. ಇದೀಗ ಸಿದ್ದರಾಮಯ್ಯ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ತಾವು ಆರೋಗ್ಯವಾಗಿರುವುದಾಗಿ ಸಿದ್ದರಾಮಯ್ಯ ಅವರು ಟ್ವೀಟ್‌ನಲ್ಲಿ ಸ್ಪಷ್ಟಪಡಿಸಿದ್ದು, ತಮ್ಮೊಂದಿಗೆ ಸಂಪರ್ಕದಲ್ಲಿದ್ದವರಿಗೆ ಕ್ವಾರಂಟೈನ್ ಆಗುವಂತೆ ಮನವಿ ಮಾಡಿದ್ದಾರೆ.

ಸಿದ್ದರಾಮಯ್ಯ ಅವರಿಗೆ ತೀವ್ರ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಪುತ್ರ, ಡಾ. ಯತೀಂದ್ರ, ಅವರ ಸಲಹೆ ಮೇರೆಗೆ ಸಿದ್ದರಾಮಯ್ಯ ಅವರನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ನಂತರ ಸಿದ್ದರಾಮಯ್ಯನವರಿಗೆ ನಡೆಸಿದ ಕರೋನಾ ಪರೀಕ್ಷೆಯಲ್ಲಿ ಸೋಂಕು ತಗುಲಿರುವುದು ದೃಢಪಟ್ಟಿದೆ. ಇದೀಗ ಏಕಕಾಲಕ್ಕೆ ರಾಜ್ಯದ ಸಿಎಂ ಮತ್ತು ಪ್ರತಿಪಕ್ಷದ ನಾಯಕರು ಒಂದೇ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮಣಿಪಾಲ್ ಆಸ್ಪತ್ರೆಯ ಮಹಡಿಯ ಎಡಭಾಗದ ವಾರ್ಡ್‌ನಲ್ಲಿ ಸಿದ್ದರಾಮಯ್ಯ ಹಾಗೂ ಬಲಭಾಗದ ವಾರ್ಡ್‌ನಲ್ಲಿ ಸಿಎಂ ಯಡಿಯೂರಪ್ಪನವರಿಗೆ ಚಿಕಿತ್ಸೆ ನೀಡಲಾಗುತ್ತಿದೆ.

| ದೇಶ | ಸೋಂಕಿತರು | ಮೃತಪಟ್ಟವರು | ಗುಣಮುಖ |
|---|---|---|---|
| ಅಮೆರಿಕ | 4,862,513 | 158,968 | 2,448,295 |
| ಬ್ರೆಜಿಲ್ | 2,751,665 | 94,702 | 1,912,319 |
| ಭಾರತ | 18,03,695 | 38,135 | 11,86,203 |
| ರಷ್ಯಾ | 861,42 | 14,351 | 661,471 |
| ದ. ಆಫ್ರಿಕಾ | 516,862 | 8,539 | 358,037 |
| ಒಟ್ಟು | 18,479,545 | 698,243 | 11,705,242 |